# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಹಾಯಕ ಅಭಿಯಂತರರ ಕಛೇರಿ, ವಾರ್ಡ್ ಸಂಖ್ಯೆ 67(ಹಳೆಯ ಸಂಖ್ಯೆ–19), ಸಂಜಯನಗರ. ಬೆಂಗಳೂರು.**

**ಸಂಖ್ಯೆ: ಸ.ಅ/ವಾ–67(ಹಳೆಯ ಸಂಖ್ಯೆ–19)/ಪಿ.ಆರ್/ 19 /2022–23** **ದಿನಾಂಕ:–17–09–2022**

## ವಾರ್ಡ್ ಸಮಿತಿ ಸಭೆಯ ನಡವಳಿಗಳು

**ವಿಷಯ:** ಮಾನ್ಯ ಆಯುಕ್ತರು ಬಿ.ಬಿ.ಎಂ.ಪಿ ರವರ ಆದೇಶ ಸಂಖ್ಯೆ:ಬಿ12(5)ಪಿ.ಆರ್/35/2020–21 ದಿನಾಂಕ:–21–09–2020. ರವರ ಆದೇಶದಂತೆ ದಿನಾಂಕ:–17–09–2022 ರಂದು ವಾರ್ಡ್ ನಂ: 67(ಹಳೆಯ ಸಂಖ್ಯೆ–19) ಸಂಜಯನಗರ ಸೆಂಟ್ರಲ್ ಎಕ್ಸೈಜ್ ಲೇಔಟ್‌ನಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು.

**::ಸಭೆಗೆ ಹಾಜರಾಗಿದ್ದವರ ವಿವರಗಳು::**

| ಕ್ರ.ಸಂ | ಹೆಸರು ಶ್ರೀಮತಿ/ಶ್ರೀ | ಪದನಾಮ | ಷರಾ |
|---|---|---|---|
| 1. | ಶ್ರೀಮತಿ. ಜ್ಯೋತಿ.ಜಿ ಚೌಳೂಲ್ಕರ್ ಸ.ಕಾ.ನಿ (ಘ.ತ್ಯಾ.ನಿ) ಪುಲಿಕೇಶಿ ನಗರ ವಿಭಾಗ | ವಾರ್ಡ್ ಸಮಿತಿ ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿಗಳು | |
| 2. | ಶ್ರೀ. ನವನಾಥ್ | ಸದಸ್ಯ ಕಾರ್ಯದರ್ಶಿ ಮತ್ತು ಸಹಾಯಕ ಅಭಿಯಂತರರು ವಾರ್ಡ್ ನಂ: 67(ಹಳೆಯ ಸಂಖ್ಯೆ–19) | |
| 3. | ಶ್ರೀ. ಸಲ್ಮಾನ್ | ಹಿರಿಯ ಆರೋಗ್ಯ ಪರಿವೀಕ್ಷಕರು. | |
| 4. | ವಾಟರ್ ಇನ್ಸ್‌ಪೆಕ್ಟರ್ | ಬಿ.ಡಬ್ಲ್ಯೂ.ಎಸ್.ಎಸ್.ಬಿ ಸಂಜಯನಗರ | |
| 5. | ತೋಟಗಾರಿಕಾ ಇನ್ಸ್‌ಪೆಕ್ಟರ್ | ತೋಟಗಾರಿಕಾ ಇಲಾಖೆ. | |
| 6. | ಪೋಲೀಸ್ ಅಧಿಕಾರಿಗಳು | ಸಂಜಯನಗರ ಪೋಲೀಸ್ ಠಾಣೆ | |
| 7. | ಸಂಚಾರಿ ಪೋಲೀಸ್ ಅಧಿಕಾರಿಗಳು | ಸಂಚಾರಿ ಪೋಲೀಸ್ ಠಾಣೆ, ಆರ್.ಟಿ ನಗರ. | |
| 8. | ಬೀದಿ ದೀಪ ನಿರ್ವಾಹಕರು | Street light Incharge, B B M P. | |
| 9. | ಶ್ರೀಮತಿ ಬಿ.ಆರ್.ಚಂದ್ರಿಕಾ | ಪಶುಸಂಗೋಪನೆ ಇಲಾಖೆ | |
| 10. | ಶ್ರೀ.ಪ್ರಕಾಶ್, ಮಾರುತಿ ರಾವ್ ಮತ್ತು ಇತರರು | ಕ್ಷೇಮಾಭಿವೃದ್ಧಿ ಸಂಘದ ಪದಾಧಿಕಾರಿಗಳು | |

ವಾರ್ಡ್ ಕಾರ್ಯದರ್ಶಿಗಳಾದ ಶ್ರೀ.ನವನಾಥ್, ಸಹಾಯಕ ಅಭಿಯಂತರರು ರವರು ಸಭೆಗೆ ಹಾಜರಾದ ಅಧ್ಯಕ್ಷರು, ಹಾಗೂ ನೋಡಲ್ ಅಧಿಕಾರಿಗಳಾದ ಶ್ರೀಮತಿ ಜ್ಯೋತಿ.ಜಿ ಚೋಳೂಲ್ಕರ್ ರವರಿಗೆ ಮತ್ತು ಸಭೆಯಲ್ಲಿ ಸೇರಿದ ಸಾರ್ವಜನಿಕರಿಗೆ ಸ್ವಾಗತ ಕೋರಿ ಸಭೆಯನ್ನು ಪ್ರಾರಂಭಿಸಲಾಯಿತು.

**ಘನತ್ಯಾಜ್ಯ ನಿರ್ವಹಣೆ:–**

1. ವಾರ್ಡ್‌ನ ಭೂಪಸಂದ್ರ ಗ್ರಾಮಠಾಣಾದಲ್ಲಿ ಘನತ್ಯಾಜ್ಯ ಸಂಗ್ರಹಣಾ ವಾಹನವು ಜನರಿಗೆ ಘನತ್ಯಾಜ್ಯವನ್ನು ವಾಹನಕ್ಕೆ ತಂದುಕೊಡಲು ಸಾಕಷ್ಟು ಸಮಯ ನೀಡುತ್ತಿಲ್ಲವೆಂದು ಸಾರ್ವಜನಿಕರು ತಿಳಿಸಿದರು.ಇದರ ಬಗ್ಗೆ ಕ್ರಮವಹಿಸಿ ಘನತ್ಯಾಜ್ಯವನ್ನು ಜನರು ವಾಹನಕ್ಕೆ ಹಾಕಲು ಸ್ವಲ್ಪ ಸಮಯಾವಕಾಶವನ್ನು ಮಾಡಿಕೊಡುವಂತೆ ಘನತ್ಯಾಜ್ಯ ನಿರ್ವಹಣಾ ಅಧಿಕಾರಿಗಳಿಗೆ ನೋಡಲ್ ಅಧಿಕಾರಿಗಳು ಸೂಚಿಸಿದರು.
2. ವಾರ್ಡ್‌ನಲ್ಲಿ ಹೆಚ್ಚು ಒಣ ಎಲೆಗಳು ಬೀಳುತ್ತಿರುವುದರಿಂದ ಲೀಫ್ ಕಾಂಪೋಸ್ಟರ್‌ಗಳನ್ನು ಅಳವಡಿಸಲು ಸೂಕ್ತ ಜಾಗಗಳನ್ನು ಗುರುತಿಸಿ ಕಡತವನ್ನು ಮಂಡಿಸಿದ ಪ್ರತಿಯನ್ನು ಮುಂದಿನ ಸಭೆಗೆ ಹಾಜರುಪಡಿಸಲು ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ಸೂಚಿಸಿದರು.

**ಬೀದಿ ದೀಪಗಳ ನಿರ್ವಹಣೆ:–**

1. ವಾರ್ಡ್‌ನ ಬೀದಿ ದೀಪಗಳನ್ನು ಸಮರ್ಪಕವಾಗಿ ನಿರ್ವಹಿಸದೆ ಇರುವ ಬಗ್ಗೆ ಸಾರ್ವಜನಿಕರು ತಿಳಿಸಿದರು. ಈ ಬಗ್ಗೆ ಗಮನಹರಿಸಿ ಬೀದಿ ದೀಪಗಳನ್ನು ಸಮರ್ಪಕವಾಗಿ ನಿರ್ವಹಿಸಿಸಲು ಹಾಗೂ ಪ್ರತಿದಿನ ವಾರ್ಡ್‌ನ ಎಲ್ಲಾ ಬೀದಿಗಳಲ್ಲಿ ಪರಿಶೀಲನೆ ಮಾಡಿ ಕಾರ್ಯನಿರ್ವಹಸದೇ ಇರುವ ಬೀದಿ

ದೀಪಗಳನ್ನು ಹುಡುಕಿ ಸರಿಪಡಿಸಬೇಕಾಗಿ ಬೀದಿ ದೀಪಗಳ ನಿರ್ವಹಣೆಯ ಗುತ್ತಿಗೆದಾರರಿಗೆ ತಿಳಿಸಲಾಯಿತು ಮತ್ತು ಗುತ್ತಿಗೆದಾರರಿಗೆ ವಾರ್ಡ್‌ನ ಎಲ್ಲಾ ಬೀದಿ ದೀಪಗಳನ್ನು ಸರಿಯಾಗಿ ನಿರ್ವಹಣೆ ಮಾಡಲು ಒಂದು ತಿಂಗಳ ಸಮಯವನ್ನು ಕೊಟ್ಟು ಆದಾಗ್ಯೂ ಸಮರ್ಪಕವಾಗಿ ನಿರ್ವಹಣೆ ಮಾಡದಿದ್ದಲ್ಲಿ ಗುತ್ತಿಗೆದಾರರಿಗೆ ಸಂಬಂಧಪಟ್ಟ ಅಧಿಕಾರಿಗಳಿಂದ ನೋಟೀಸ್ ನೀಡುವುದಾಗಿ ನೋಡಲ್ ಅಧಿಕಾರಿಗಳು ತಿಳಿಸಿದರು.

**ಬೃಹತ್ ನೀರು ಕಾಲುವೆ:-**

1. ವಾರ್ಡ್‌ನಲ್ಲಿ ಹಾದು ಹೋಗುತ್ತಿರುವ ಬೃಹತ್ ನೀರು ಕಾಲುವೆಗಳಲ್ಲಿ ಕಸ ಕಡ್ಡಿ ತುಂಬಿರುತ್ತದೆ, ಹಲ್ಲು ಬೆಳೆದಿರುತ್ತದೆ ಮತ್ತು ಬೃಹತ್ ನೀರು ಕಾಲುವೆಗಳ ಗೋಡೆಗಳು (ಕೆಲವು ಕಡೆ) ಕುಸಿದಿರುತ್ತವೆ ಎಂದು ಸಾರ್ವಜನಿಕರು ತಿಳಿಸಿದರು. ಈ ಬಗ್ಗೆ ಗಮನ ಹರಿಸಿ ಬೃಹತ್ ನೀರು ಕಾಲುವೆಗಳನ್ನು ಡಿ ಸಿಲ್ಟ್ ಮಾಡಲು ಮತ್ತು ಕಾಲುವೆ ಗೋಡೆಗಳನ್ನು ಸರಿಪಡಿಸಬೇಕಾಗಿ ಬೃಹತ್ ಮಳೆ ನೀರು ಕಾಲುವೆ ನಿರ್ವಹಣೆ ಮಾಡುವ ಅಧಿಕಾರಿಗಳು ತಿಳಿಸಲು ಬಿ.ಬಿ.ಎಂ.ಪಿ ಸಹಾಯಕ ಅಭಿಯಂತರರಿಗೆ ನೋಡಲ್ ಅಧಿಕಾರಿಗಳು ತಿಳಿಸಿದರು.

**ಆರೋಗ್ಯ ಇಲಾಖೆ:-**

1. ವಾರ್ಡ್‌ನಲ್ಲಿ ಪ್ಲಾಸ್ಟಿಕ್ ಬಳಕೆ ಹೆಚ್ಚಾಗುತ್ತಿರುವುದರ ಬಗ್ಗೆ ಸಾರ್ವಜನಿಕರು ದೂರಿದರು. ಮತ್ತು ಪಾದಚಾರಿ ಮಾರ್ಗಗಳ ಮೇಲೆ ತಿಂಡಿ ತಿನಿಸುಗಳನ್ನು ಇಡುವ ತಳ್ಳು ಗಾಡಿಗಳಿಂದ ಒತ್ತುವರಿ ಆಗುತ್ತಿರುವ ಬಗ್ಗೆಯೂ ಸಹ ಸಾರ್ವಜನಿಕರು ದೂರಿದರು, ಈ ಬಗ್ಗೆ ಬಿ.ಬಿ.ಎಂ.ಪಿ ಅಧಿಕಾರಿಗಳು, ಆರೋಗ್ಯ ಅಧಿಕಾರಿಗಳು ಮತ್ತು ಪೊಲೀಸ್ ಅಧಿಕಾರಿಗಳು ಜಂಟಿಯಾಗಿ ಸೇರಿ ಫುಟ್‌ಪಾತ್ ಡ್ರೈವ್ ಮಾಡಿ ಒತ್ತುವರಿಯನ್ನು ತೆರವುಗೊಳಿಸಲು ನೋಡಲ್ ಅಧಿಕಾರಿಗಳು ಸೂಚಿಸಿದರು.
2. ಹೊಯ್ಸಳ ಅಪಾರ್ಟ್‌ಮೆಂಟ್ ಹಿಂದೆ ಇರುವ ರಸ್ತೆಗಳಲ್ಲಿ ಸಾರ್ವಜನಿಕರು ಕಸ ಮತ್ತು ಘನತ್ಯಾಜ್ಯವನ್ನು ಎಸೆದು ಗಲೀಜು ಮಾಡುತ್ತಿರುವ ಬಗ್ಗೆ ಸಾರ್ವಜನಿಕರು ತಿಳಿಸಿದರು. ಸದರಿ ವಿಷಯದ ಬಗ್ಗೆ ಆರೋಗ್ಯಾಧಿಕಾರಿಗಳು ಮತ್ತು ಬಿ.ಬಿ.ಎಂ.ಪಿ ಅಧಿಕಾರಿಗಳು ಒಟ್ಟಿಗೆ ಸೇರಿ ಕ್ರಮ ವಹಿಸಬೇಕಾಗಿ ನೋಡಲ್ ಅಧಿಕಾರಿಗಳು ಸೂಚಿಸಿದರು.

**ಕಾಮಗಾರಿ ಇಲಾಖೆ:-**

1. ವಾರ್ಡ್‌ನ ಕೆ.ಇ.ಬಿ ಲೇಔಟ್, ಆರ್.ಎಂ.ಎಸ್ ಬಡಾವಣೆ ಮತ್ತು ಇತರೆ ಕ್ರಾಸ್ ರಸ್ತೆಗಳು ಹಾಳಾಗಿರುವ ಬಗ್ಗೆ ಸಾರ್ವಜನಿಕರು ದೂರಿದರು. ಈಗಾಗಲೆ ಕೆಲವು ರಸ್ತೆಗಳ ಡಾಂಬರೀಕರಣಕ್ಕೆ ಟೆಂಡರ್ ಕರೆಯಲಾಗಿದ್ದು, ಮುಂದಿನ ದಿನಗಳಲ್ಲಿ ರಸ್ತೆಗಳ ಡಾಂಬರೀಕರಣ ಮಾಡುವುದಾಗಿ ಬಿ.ಬಿ.ಎಂ.ಬಿ ಅಭಿಯಂತರರು ಸಾರ್ವಜನಿಕರಿಗೆ ತಿಳಿಸಿದರು.

**ಕಂದಾಯ ಇಲಾಖೆ:-**

1. ಕಂದಾಯ ಇಲಾಖೆಯ ಅಧಿಕಾರಿಗಳಿಗೆ ಮುಂದಿನ ಸಭೆಗೆ ಕಡ್ಡಾಯವಾಗಿ ಹಾಜರಾಗಬೇಕಾಗಿ ತಿಳಿಸಿದರು. ಹಾಗೂ ವಾರ್ಡ್‌ನ ಗಡಿಯನ್ನು ಗುರುತಿಸುವುದು ಮತ್ತು ಮತದಾರರ ಗುರುತಿನ ಚೀಟಿಯನ್ನು ಪಾನ್‌ಕಾರ್ಡ್ ಜೊತೆ ಲಿಂಕ್ ಮಾಡುವ ಬಗ್ಗೆ ಜನರಿಗೆ ತಿಳುವಳಿಕೆ ನೀಡಲು ನೋಡಲ್ ಅಧಿಕಾರಿಗಳು ಸೂಚಿಸಿದರು ಹಾಗೂ ಹೊಯ್ಸಳ ಅಪಾರ್ಟ್‌ಮೆಂಟ್ ಹಿಂದೆ ಇರುವ ಖಾಲಿ ನಿವೇಶನಗಳ ಮಾಲೀಕರ ಹೆಸರು ಮತ್ತು ವಿಳಾಸಗಳನ್ನು ತಿಳಿದುಕೊಂಡು ವಾರ್ಡ್ ಅಭಿಯಂತರರಿಗೆ ಕೊಡಬೇಕಾಗಿ ತಿಳಿಸಿದರು.

**ಉದ್ಯಾನವನ:-**

1. ವಾರ್ಡ್‌ನ ವಿನಾಯಕ ಲೇಔಟ್ ಪಾರ್ಕ್, ಸೆಟಿಟ್ರಲ್ ಎಕ್ಸೈಜ್ ಲೇಔಟ್ ಪಾರ್ಕ್ ಮತ್ತು ರಘುವನ ಪಾರ್ಕ್‌ಗಳ ಸಮರ್ಪಕವಾಗಿ ನಿರ್ವಹಣೆ ಮಾಡದಿರುವ ಬಗ್ಗೆ ಸಾರ್ವಜನಿಕರು ದೂರಿದರು. ಸದರಿ ವಿಷಯುದ ಬಗ್ಗೆ ಕ್ರಮ ಕೈಗೊಳ್ಳಲು ತೋಟಗಾರಿಕಾ ಇಲಾಖೆಯ ಅಧಿಕಾರಿಗಳಿಗೆ ನೋಡಲ್ ಅದಿಕ್ಕರಿಗಳು ಸೂಚಿಸಿದರು. ಪಾರ್ಕ್‌ನಲ್ಲಿ ಅಳವಡಿಸಿರುವ ಜಿಮ್ ಮತ್ತು ಮಕ್ಕಳು ಆಟ ಆಡುವ ಉಪಕರಣಗಳನ್ನು ಬಿ.ಬಿ.ಎಂ.ಪಿ ಯೋಜನಾ ವಿಭಾಗದವರು ನಿರ್ವಹಣೆ ಮಾಡಬೇಕಾಗಿದ್ದು, ಸದರಿ ಅದಿಕ್ಕರಿಗಳು ಮುಂದಿನ ಸಭೆಯಲ್ಲಿ ಕಡ್ಡಾಯವಾಗಿ ಹಾಜರಿರುವಂತೆ ನೋಟೀಸ್ ನೀಡಲು ನೋಡಲ್ ಅಧಿಕಾರಿಗಳು ಸೂಚಿಸಿದರು.

**ಅರಣ್ಯ ಇಲಾಖೆ:-**

1. ಇಲ್ಲಿಯವರೆಗೂ ಯಾವುದೇ ಸಭೆಗೂ ಅರಣ್ಯಾಧಿಕಾರಿಗಳು ಹಾಜರಾಗದಿರುವ ಬಗ್ಗೆ ನೋಡಲ್ ಅಧಿಕಾರಿಗಳು ವಿಷಾದ ವ್ಯಕ್ತ ಪಡಿಸಿದರು. ಮತ್ತು ಸದರಿ ಅಧಿಕಾರಿಗಳಿಗೆ ವಾರ್ಡ್ ಸಭೆಗೆ ಹಾಜರಾಗಲು ಪತ್ರ ಮುಖಾಂತರ ತಿಳಿಸಲು ನೋಡಲ್ ಅಧಿಕಾರಿಗಳು ಸೂಚಿಸಿದರು.

2. ವಾರ್ಡ್‌ನಲ್ಲಿ ಬರುವ ವಿನಾಯಕ ಲೇಔಟ್, ಆರ್.ಎಂ.ಎಸ್ ಲೇಔಟ್ ಮತ್ತು ಸೆಂಟ್ರಲ್ ಎಕ್ಸೈಜ್ ಲೇಔಟ್‌ನಲ್ಲಿ ಜೋತುಬಿದ್ದಿರುವ ಮರದ ಕೊಂಬೆಗಳನ್ನು ಕತ್ತರಿಸಲು ಅರಣ್ಯಾಧಿಕಾರಿಗಳಿಗೆ ಸೂಚಿಸುವಂತೆ ನೋಡಲ್ ಅಧಿಕಾರಿಗಳು ಬಿ.ಬಿ.ಎಂ.ಪಿ ಅಭಿಯಂತರರಿಗೆ ತಿಳಿಸಿದರು. ಅರಣ್ಯ ಇಲಾಖೆಯ ಅಧಿಕಾರಿಗಳು ಸಭೆಗೆ ಹಾಜರಾಗದಿರುವ ಬಗ್ಗೆ ವಿಷಾದ ವ್ಯಕ್ತ ಪಡಿಸಿ ಮುಂದಿನ ಸಭೆಗೆ ಕಡ್ಡಾಯವಾಗಿ ಹಾಜರಿರುವಂತೆ ಸೂಚಿಸಿದರು.

**ಪಶುಸಂಗೋಪನೆ:-**

1. ಪಶು ಸಂಗೋಪನಾಧಿಕಾರಿಗಳಿಗೆ ವಾರ್ಡ್‌ನಲ್ಲಿರುವ ಅನಧಿಕೃತ ಮಾಂಸ ಮಾರಟ ಮಳಿಗೆಗಳನ್ನು ಗುರುತಿಸಿ ತೆರವುಗೊಳಿಸಲು ಮತ್ತು ಮಾಂಸ ತ್ಯಾಜ್ಯ ನಿರ್ವಹಣೆ ಬಗ್ಗೆ ಗಮನ ಹರಿಸಲು ನೋಡಲ್ ಅಧಿಕಾರಿಗಳು ಸೂಚಿಸಿದರು.

**ಬಿ.ಡಬ್ಲ್ಯೂ.ಎಸ್.ಎಸ್.ಬಿ:-**

1. ಸೆಂಟ್ರಲ್ ಎಕ್ಸೈಜ್ ಲೇಔಟ್‌ನ ಬೃಹತ್ ಮಳೆನೀರು ಕಾಲುವೆಗೆ ಕೊಳಚೆ ನೀರು ಸೇರುತ್ತಿರುವ ಸಮಸ್ಯೆಯನ್ನು ಬಗೆಹರಿಸಿರುವ ಬಗ್ಗೆ ಸಾರ್ವಜನಿಕರು ಸಂತಸವನ್ನು ವ್ಯಕ್ತ ಪಡಿಸಿದರು.
2. ವಾರ್ಡ್‌ನ ಯು.ಎ.ಎಸ್ ಲೇಔಟ್‌ನ 4ನೇ ಮತ್ತು 5ನೇ ಅಡ್ಡರಸ್ತೆ ಮತ್ತು ಭೂಪಸಂದ್ರ ಮುಖ್ಯರಸ್ತೆಯ ಅಕ್ಕ ಪಕ್ಕದ ಏರಿಯಾದಲ್ಲಿ ಎನ್.ಜಿ.ಎಫ್ ಲೇಔಟ್ ಮತ್ತು ಮ್ಯಾನ್‌ಹೋಲ್‌ಗಳು ತುಂಬಿ ಓವರ್ ಫ್ಲೋ ಆಗುತ್ತಿರುವ ಬಗ್ಗೆ ಸಾರ್ವಜನಿಕರು ದೂರಿದರು. ಈ ಸಮಸ್ಯೆಗಳ ಬಗ್ಗೆ ಗಮನಹರಿಸಿ ತುರ್ತಾಗಿ ಸಮಸ್ಯೆಗಳನ್ನು ನಿರ್ವಹಿಸಲು ಬಿ.ಡಬ್ಲ್ಯೂ.ಎಸ್.ಎಸ್.ಬಿ ಅಧಿಕಾರಿಗಳಿಗೆ ನೋಡಲ್ ಅಧಿಕಾರಿಗಳು ಸೂಚಿಸಿದರು.
3. ಭೂಪಸಂದ್ರ ಬಡಾವಣೆಯ ಮೊಹಮ್ಮದ್ ಲೇಔಟ್ ನಲ್ಲಿ ವಾಟರ್ ಕಂಟ್ಯಾಮಿನೇಟ್ ಆಗುತ್ತಿರುವ ಬಗ್ಗೆ ಸಾರ್ವಜನಿಕರು ತಿಳಿಸಿದರು. ಈ ಬಗ್ಗೆ ಕೂಡಲೇ ಕ್ರಮ ವಹಿಸಲು ನೋಡಲ್ ಅಧಿಕಾರಿಗಳು ಸೂಚಿಸಿದರು.
4. ಸಂಜಯನಗರ ಮುಖ್ಯರಸ್ತೆಯಲ್ಲಿ ಪಿ.ವಿ.ಸಿ ಪೈಪ್‌ಗಳನ್ನು ಡಿ.ಐ ಪೈಪ್‌ಗಳಿಗೆ ಬದಲಾವಣೆ ಮಾಡಿದರೆ ವಾರ್ಡ್‌ನ ಒಳಚರಂಡಿಗೆ ಸಂಬಂಧಿಸಿದಂತೆ ಹಲವು ಸಮಸ್ಯೆಗಳು ಬಗೆಹರಿಯುವುದಾಗಿ ಬಿ.ಡಬ್ಲ್ಯೂ.ಎಸ್.ಎಸ್.ಬಿ ಸಹಾಯಕ ಅಭಿಯಂತರರು ತಿಳಿಸಿದರು ಹಾಗೂ ಸದರಿ ವಿಷಯದ ಬಗ್ಗೆ ರಸ್ತೆ ಅಗೆತದ ಅನುಮತಿಗಾಗಿ ಮಾರ್ಚ್‌ನಲ್ಲಿ ಮನವಿ ಸಲ್ಲಿಸಿರುವುದಾಗಿ ಇನ್ನು ಅನುಮತಿ ದೊರೆಯದೇ ಇರುವುದರಿಂದ ವಾರ್ಡ್ ಸಮಿತಿಯಿಂದ ಮೇಜರ್ ರೋಡ್ ರವರಿಗೆ ಬೇಗ ಅನುಮತಿ ನೀಡಲು ಶಿಫಾರಸ್ಸು ಮಾಡಬೇಕಾಗಿ ಸಾರ್ವಜನಿಕರು ಕೋರಿದರು. ಅದರಂತೆ ಕ್ರಮ ವಹಿಸಲು ನೋಡಲ್ ಅಧಿಕಾರಿಗಳು ಸೂಚಿಸಿದರು.

**ಪೊಲೀಸ್/ಟ್ರಾಫಿಕ್:-**

1. ಸಂಜಯನಗರ ಸೆಂಟ್ರಲ್ ಎಕ್ಸೈಜ್ ಲೇಔಟ್ ರಸ್ತೆ ಮತ್ತು 4ನೇ ಎ ಕ್ರಾಸ್, ಟೆಲಿಫೋನ್ ಎಕ್ಸ್‌ಚೇಂಜ್ ಹತ್ತಿರ ಪುಂಡಪೋಕರಿಗಳಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿದ್ದು, ಪೊಲೀಸ್ ಅಧಿಕಾರಿಗಳು ಸದರಿ ರಸ್ತೆಗಳಲ್ಲಿ ಬೀಟ್ ಹೋಡೆದು ಕ್ರಮ ವಹಿಸುವಂತೆ ನೋಡಲ್ ಅಧಿಕಾರಿಗಳು ಸೂಚಿಸಿದರು. ಉಡುಪಿ ಹೋಟೆಲ್ ಹತ್ತಿರ ಸಾರ್ವಜನಿಕರು ಪಾರ್ಸಲ್ ತೆಗೆದುಕೊಳ್ಳಲು ತಮ್ಮ ವಾಹನಗಳನ್ನು ಮುಖ್ಯರಸ್ತೆಯ ಮೇಲೆ ನಿಲ್ಲಿಸಿ ಹೋಗುವುದರಿಂದ ಟ್ರಾಫಿಕ್ ಸಮಸ್ಯೆ ಉಂಟಾಗುತ್ತಿದ್ದು, ಈ ಬಗ್ಗೆ ಟ್ರಾಫಿಕ್ ಪೊಲೀಸ್ ರವರು ಗಮನ ಹರಿಸಬೇಕಾಗಿ ನೋಡಲ್ ಅಧಿಕಾರಿಗಳು ಸೂಚಿಸಿದರು.

**ಬೆಸ್ಕಾಂ:-**

1. ವಾರ್ಡ್‌ನಲ್ಲಿ ಬೆಸ್ಕಾಂ ನಿಂದ ಯು.ಜಿ ಕೇಬಲ್ ಅಳವಡಿಸುತ್ತಿರುವ ಕಾಮಗಾರಿ ಪ್ರಗತಿಯಲ್ಲಿದ್ದು, ರಸ್ತೆ ಗುಂಡಿಗಳು ನಿರ್ಮಾಣವಾಗುತ್ತಿರುತ್ತವೆ. ಸದರಿ ಗುಂಡಿಗಳನ್ನು ಈಗಾಗಲೇ ಮುಚ್ಚಿದರು ಸಹ ಮಳೆ ನೀರು ಹರಿದು ಸದರಿ ಗುಂಡಿಗಳಲ್ಲಿನ ಮಣ್ಣು ಶ್ರಿಂಕ್ ಆಗಿ ಮತ್ತೆ ಗುಂಡಿ ನಿರ್ಮಾಣವಾಗುತ್ತಿದ್ದು, ಸದರಿ ಗುಂಡಿಗಳನ್ನು ಮತ್ತೊಂದು ಸಾರಿ ಪರಿಶೀಲಿಸಿ ಮತ್ತೆ ಗುಂಡಿಗಳನ್ನು ಮುಚ್ಚಲು ಕ್ರಮ ವಹಿಸಬೇಕಾಗಿ ಬೆಸ್ಕಾಂ ಗುತ್ತಿಗೆದಾರರುಗಳಿಗೆ ನೋಡಲ್ ಅಧಿಕಾರಿಗಳು ಸೂಚಿಸಿದರು.

ವಾರ್ಡ್‌ನ ಅಧ್ಯಕ್ಷರು ಮಾತನಾಡುತ್ತಾ ಈ ಮೇಲಿನ ಎಲ್ಲಾ ಅಂಶಗಳನ್ನು ಕೂಡಲೇ ಬಗೆಹರಿಸುವಂತೆ ವಾರ್ಡ್ ಕಾರ್ಯದರ್ಶಿಗಳಿಗೆ ತಿಳಿಸುತ್ತಾ ಮತ್ತು ಸಭೆಯಲ್ಲಿ ಹಾಜರಿದ್ದ ಎಲ್ಲಾ ಸಾರ್ವಜನಿಕರಿಗೆ ವಂದನೆಗಳನ್ನು ತಿಳಿಸುತ್ತಾ ಈ ಸಭೆಯನ್ನು ಮುಕ್ತಾಯಗೊಳಿಸಿದರು.

ವಾರ್ಡ್ ಸದಸ್ಯ ಕಾರ್ಯದರ್ಶಿಗಳು
ಹಾಗೂ ಸಹಾಯಕ ಅಭಿಯಂತರರು
ವಾರ್ಡ್–67(ಹಳೆಯ ಸಂಖ್ಯೆ–19),
ಸಂಜಯನಗರ

ಅಧ್ಯಕ್ಷರು
ಹಾಗೂ ನೋಡಲ್ ಅಧಿಕಾರಿಗಳು
ವಾರ್ಡ್–67(ಹಳೆಯ ಸಂಖ್ಯೆ–19),
ಸಂಜಯನಗರ

**<u>ಪ್ರತಿಯನ್ನು:–</u>**

1. ಮಾನ್ಯ ಜಂಟಿ ಆಯುಕ್ತರು (ಪೂರ್ವ) ಬಿ.ಬಿ.ಎಂ.ಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
2. ವಾರ್ಡ್ ಸಮಿತಿಯ ಅಧ್ಯಕ್ಷರ ಮಾಹಿತಿಗಾಗಿ ಕಳುಹಿಸಿದೆ.
3. ವಾರ್ಡ್ ಸಮಿತಿಯ ಸದಸ್ಯರುಗಳ ಮಾಹಿತಿಗಾಗಿ ಕಳುಹಿಸಿದೆ.
4. ಕಛೇರಿ ಪ್ರತಿ.